# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 788

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು)

ಉತ್ತರಿಸುವ ದಿನಾಂಕ : 25.09.2020

ಉತ್ತರಿಸುವ ಸಚಿವರು : ಮಾನ್ಯ ಗೃಹ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಸಾರ್ವಜನಿಕ (ಸರ್ಕಾರಿ) ಹಾಗೂ ಖಾಸಗಿ ಸಾರಿಗೆಗಳಲ್ಲಿ ತಪಾಸಣೆ ಆಗದ ಸರಕು ಸಾಗಣೆ ಮೂಲಕ ಮಾದಕ ವಸ್ತುಗಳು ರಾಜ್ಯಾದ್ಯಂತ ಶೈಕ್ಷಣಿಕ, ಸಿನಿಮಾ ರಂಗ ಮತ್ತು ಸಾರ್ವಜನಿಕ ವಲಯಗಳಲ್ಲಿ ವ್ಯಾಪಕವಾಗಿ ಹರಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿನ ಜಿಲ್ಲಾ ಮತ್ತು ಅಂತರ ಜಿಲ್ಲಾ ಚೆಕ್ ಪೋಸ್ಟ್‌ಗಳ ಮೂಲಕ ಸಾಗುವ ಎಲ್ಲಾ ಸರಕು ಸಾಗಾಣೆ ವಾಹನಗಳನ್ನು ಕಡ್ಡಾಯವಾಗಿ ತಪಾಸಣೆಗೊಳ ಪಡಿಸಲಾಗುತ್ತಿದೆ. ಅಲ್ಲದೆ ಸರ್ಕಾರಿ/ಖಾಸಗಿ ಸಾರಿಗೆ ಪ್ರಯಾಣಿಕ ವಾಹನಗಳನ್ನು ಅನುಮಾನಸ್ಪದ/ಗುಪ್ತ ಮಾಹಿತಿ ಮೇರೆಗೆ ತಪಾಸಣೆ ಗೊಳಪಡಿಸಲಾಗುತ್ತಿದೆ. |
| ಆ | ಸಾರಿಗೆ ವಾಹನಗಳಲ್ಲಿ ಬರುವ ಸರಕು ಸಾಗಣೆಗಳನ್ನು ಸೂಕ್ತ ರೀತಿಯಲ್ಲಿ ತಪಾಸಣೆ ನಡೆಸಲು ಸರ್ಕಾರ ತೆಗೆದುಕೊಂಡ ಕ್ರಮವೇನು; (ವಿವರ ನೀಡುವುದು) | ಸಾರಿಗೆ ವಾಹನಗಳಲ್ಲಿ ಬರುವ ಸರಕು ಸಾಗಾಣೆಗಳನ್ನು ಸೂಕ್ತ ರೀತಿಯಲ್ಲಿ ತಪಾಸಣೆ ನಡೆಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ರಾಜ್ಯಕ್ಕೆ ಹೊಂದಿಕೊಂಡಂತೆ ಇರುವ ನೆರೆ ರಾಜ್ಯಗಳಾದ ಆಂಧ್ರಪ್ರದೇಶ, ತಮಿಳುನಾಡು, ಗೋವಾ, ಮಹಾರಾಷ್ಟ್ರ, ತೆಲಂಗಾಣ ರಾಜ್ಯಗಳಿಗೆ ಹೊಂದಿಕೊಂಡಂತೆ ಇರುವ ಜಿಲ್ಲೆಗಳಾದ ಬೆಂಗಳೂರು ಜಿಲ್ಲೆ, ತುಮಕೂರು, ಚಿಕ್ಕಬಳ್ಳಾಪುರ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಬೆಳಗಾವಿ, ಕಲ್ಬುರ್ಗಿ ಜಿಲ್ಲೆ, ರಾಯಚೂರು, ಮೈಸೂರು ಹಾಗೂ ಕೋಲಾರ ಜಿಲ್ಲೆಗಳಲ್ಲಿ ಒಟ್ಟು 33 ಅಂತರ್ ರಾಜ್ಯ ಚೆಕ್‌ಪೋಸ್ಟ್‌ಗಳನ್ನು ತೆರೆದಿದ್ದು, ಪೊಲೀಸ್ ಅಧಿಕಾರಿ/ಸಿಬ್ಬಂದಿಗಳನ್ನು ಹಗಲು ಮತ್ತು ರಾತ್ರಿ ಪಾಳಿ ಅನ್ವಯ ನಿಯೋಜಿಸಿ, ಎಲ್ಲಾ ಸರಕು ಸಾಗಾಣೆ/ ಖಾಸಗಿ ವಾಹನಗಳನ್ನು ತಪಾಸಣೆ ನಡೆಸಲಾಗುತ್ತಿದೆ.<br>➢ ರಾಜ್ಯದಲ್ಲಿನ ಎಲ್ಲಾ ಜಿಲ್ಲೆಗಳಲ್ಲಿ ಒಟ್ಟು 82 ಅಂತರ್ ಜಿಲ್ಲಾ ಚೆಕ್‌ಪೋಸ್ಟ್‌ಗಳನ್ನು ತೆರೆದಿದ್ದು ಪೊಲೀಸ್ ಅಧಿಕಾರಿ/ ಸಿಬ್ಬಂದಿಗಳೊಂದಿಗೆ ದಿನದ 24 ಗಂಟೆಗಳ ಕಾಲ ತಪಾಸಣೆ ಕೈಗೊಳ್ಳಲಾಗುತ್ತಿದೆ.<br>➢ ಸಾರಿಗೆ ವಾಹನಗಳಲ್ಲಿ ಬರುವ ಸರಕು ಸಾಗಾಣೆಗಳನ್ನು ಸೂಕ್ತ ರೀತಿಯಲ್ಲಿ ತಪಾಸಣೆ ನಡೆಸಲು ರೈಲ್ವೆ ಪಾರ್ಸಲ್ ಆಫೀಸ್ ಬಳಿ ಪೊಲೀಸ್ ಸಿಬ್ಬಂದಿಯನ್ನು ನೇಮಕ ಮಾಡಿ, ತಪಾಸಣೆ ಕೈಗೊಳ್ಳಲಾಗುತ್ತಿದೆ.<br>➢ ಅಲ್ಲದೆ ಕಾಲಕಾಲಕ್ಕೆ ಜಿಲ್ಲೆಗಳಲ್ಲಿನ ಇತರೆ ಕಡೆಗಳಲ್ಲಿ ನಾಕಾಬಂಧಿ ನಡೆಸಿ, ವಾಹನಗಳ ತಪಾಸಣೆ ಕೈಗೊಳ್ಳಲಾಗುತ್ತಿದೆ.<br>➢ ಶ್ವಾನದಳವನ್ನು ಜಿಲ್ಲೆಯ ಪ್ರಮುಖ ಸಾರ್ವಜನಿಕ ಸ್ಥಳಗಳು, ಬಸ್ ನಿಲ್ದಾಣಗಳು ಹಾಗೂ ರೈಲ್ವೆ ನಿಲ್ದಾಣಗಳಲ್ಲಿ ನಿಯೋಜಿಸಿದ್ದು, ಮಾದಕ ವಸ್ತು ಇರುವಿಕೆ ಬಗ್ಗೆ ತಪಾಸಣೆ ಕೈಗೊಳ್ಳಲಾಗುತ್ತಿದೆ. |
| ಇ | ಪ್ರಮುಖವಾಗಿ ಗಡಿಭಾಗಗಳಲ್ಲಿ ಕಟ್ಟೆಚ್ಚರ ವಹಿಸಲು ಮತ್ತು ಮಾದಕ ವಸ್ತುಗಳ ಸಾಗಣೆಯನ್ನು ತಡೆಯಲು ಸಾರಿಗೆ ಇಲಾಖೆಯಿಂದ ವಿವಿಧ ಇಲಾಖೆಗಳ ಜೊತೆ ಗೂಡಿ ಕಾರ್ಯಪಡೆ ರಚನೆಗೆ ಸರ್ಕಾರ ಚಿಂತಿಸಿದೆಯೇ; (ವಿವರ ನೀಡುವುದು) | |

| | | |
|---|---|---|
| ಈ | ಸಾರ್ವಜನಿಕ ಸಂಚಾರದ ಪರವಾನಗಿ ಪಡೆದು ಹಲವು ಖಾಸಗಿ ಬಸ್ಸುಗಳು ಸರಕು ಸಾಗಣೆಯನ್ನು ಹೆಚ್ಚಾಗಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು) | ಸಾರ್ವಜನಿಕ ಸಂಚಾರ ಪರವಾನಿಗೆ ಪಡೆದು ಹಲವು ಖಾಸಗಿ ಬಸ್ಸುಗಳು ಸರಕು ಸಾಗಣೆ ಸಾಗಿಸುತ್ತಿರುವುದು ಕಂಡುಬಂದಿದ್ದು, ಅಂತಹ ವಾಹನಗಳ ವಿರುದ್ಧ ದಿನಾಂಕ:31.08.2020ರ ಅಂತ್ಯಕ್ಕೆ ಒಟ್ಟು 19,892 ವಾಹನಗಳನ್ನು ತಪಾಸಿಸಿ, 1,984 ಪ್ರಕರಣಗಳನ್ನು ದಾಖಲಿಸಿ, 8 ವಾಹನಗಳನ್ನು ವಶಪಡಿಸಿಕೊಂಡು, ಒಟ್ಟು ರೂ. 8.42 ಲಕ್ಷಗಳನ್ನು ತೆರಿಗೆ ಮತ್ತು ದಂಡ ರೂಪದಲ್ಲಿ ವಸೂಲಿಸಲಾಗಿದೆ. |

ಒಇ 30 ಪಿಎನ್‌ಡಿ 2020

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು